ವಿಷಯ : ರಾಜ್ಯದ ವಸತಿ ಹೀನ ಜನರ ಸಮಸ್ಯೆ ಕುರಿತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 739 (734)

ಶ್ರೀ ಎನ್. ಯೋಗೀಶ್ ಭಟ್ (ಮಂಗಳೂರು) : ಮಾನ್ಯ ವಸತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ

ಅ. ಕರ್ನಾಟಕ ರಾಜ್ಯದಲ್ಲಿ ಎಷ್ಟು ಜನ ವಸತಿಹೀನ ಪ್ರಜೆಗಳು ಇದ್ದಾರೆ. (ಗ್ರಾಮ ಹಾಗೂ ನಗರ ಪ್ರದೇಶಗಳ ಪ್ರತ್ಯೇಕ ವಿವರ ನೀಡುವುದು)

ಆ. 1995-96ರಲ್ಲಿ ಎಷ್ಟು ಮನೆಗಳನ್ನು ಕಟ್ಟುವ ಯೋಜನೆ ಸರ್ಕಾರ ಹಾಕಿ ಕೊಂಡಿದೆ.

ಇ. ಖಾಸಗಿ ಬಂಡವಾಳ ಹೂಡಿಕೆಗೆ ಹಾಗೂ ಖಾಸಗಿ ವಲಯಗಳಿಂದ ಎಷ್ಟು ಮನೆಗಳನ್ನು ಕಟ್ಟಿಸಿಕೊಡಲು ಸರ್ಕಾರ ಯೋಚಿಸಿದೆ

ಈ. ಇದಕ್ಕಾಗಿ ಖಾಸಗಿ ವ್ಯಕ್ತಿಗಳಿಗೆ ಸರ್ಕಾರ ಕೊಡುವ ಪ್ರೋತ್ಸಾಹಗಳೇನು?

ಶ್ರೀ ಬಸವರಾಜ ರಾಯರೆಡ್ಡಿ (ವಸತಿ ರಾಜ್ಯ ಸಚಿವರು):

ಅ. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು : ಮುಖ್ಯಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ರಾಜ್ಯದಲ್ಲಿ ಸರ್ವೆ ನಡೆಸಿ ನಿವೇಶನ ಮತ್ತು ವಸತಿರಹಿತ ಕುಟುಂಬ ಗುರುತಿಸಲು ಮಾರ್ಗಸೂಚಿಯನ್ನು ಹೊರಡಿಸಿದೆ. ಸರ್ವೆ ಕಾರ್ಯ ಮುಗಿದ ನಂತರ ವಿವರ ದೊರೆಯುತ್ತದೆ.

ಆ. 1995-96ನೇ ಸಾಲಿನಲ್ಲಿ ಒಂದು ಲಕ್ಷ ಮನೆಗಳನ್ನು ನಿರ್ಮಿಸಲು ಉದ್ದೇಶಿಸಿದೆ. ಆಶ್ರಯ ಯೋಜನೆ 60,000 ಡಾ: ಅಂಬೇಡ್ಕರ್ ಯೋಜನೆ 25,000 ಇಂದಿರಾ ಆವಾಸ್ಥಿ - 15,000

ಇ. ಸದ್ಯದ ಪರಿಸ್ಥಿತಿಯಲ್ಲಿ ಈ ಬಗ್ಗೆ ಯಾವ ಆಲೋಚನೆ ಇಲ್ಲ.

ವಿಷಯ : ಗಡಿನಾಡು ಕನ್ನಡಿಗರ ಅಕಾಡಮಿ ಸ್ಥಾಪನೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 740 (1166)

ಶ್ರೀ ಎನ್. ಯೋಗೀಶ್ ಭಟ್ (ಮಂಗಳೂರು)

ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ. ಗಡಿನಾಡ ಕನ್ನಡಿಗರ ಅಕಾಡೆಮಿಯನ್ನು ಸ್ಥಾಪಿಸಿ ಕಾಸರಗೋಡು ಜಿಲ್ಲೆಯ ಕನ್ನಡ ಬಾಂಧವರ ಸಾಮಾಜಿಕ ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಹಿತಾಸಕ್ತಿಯನ್ನು ಕಾಪಾಡಲು ರಾಜ್ಯ ಸರ್ಕಾರ ಬಯಸುತ್ತದೆಯೆ ?

ಆ. ಹಾಗಿಲ್ಲದಿದ್ದಲ್ಲಿ, ಯಾವ ಕಾರ್ಯಕ್ರಮಗಳಿಂದ ಗಡಿನಾಡ ಕನ್ನಡಿಗರ ವಿಶೇಷವಾಗಿ ಕಾಸರಗೋಡು ಜಿಲ್ಲೆಯ ಕನ್ನಡಿಗರ ಹಿತಾಸಕ್ತಿಯನ್ನೆ ಕಾಪಾಡಲು ಸರ್ಕಾರ ಬಯಸುತ್ತದೆ ?